# National
# Kannada
# 16.02.2026 7.35 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ನವದೆಹಲಿಯಲ್ಲಿಂದು ಇಂಡಿಯಾ ಎಐ ಇಂಪ್ಯಾಕ್ಟ್ ವಸ್ತುಪ್ರದರ್ಶನ ಉದ್ಘಾಟಿಸಿದ ಪ್ರಧಾನಿ ನರೇಂದ್ರ ಮೋದಿ
2. ಬೆಂಗಳೂರಿನಲ್ಲಿ ಸ್ವದೇಶಿ ಮಿಲಿಟರಿ ಗ್ಯಾಸ್ ಟರ್ಬೈನ್ ಇಂಜಿನ್ ಅಭಿವೃದ್ಧಿಯ ಪ್ರಗತಿ ಪರಿಶೀಲನೆ ನಡೆಸಿದ ರಕ್ಷಣಾ ಸಚಿವರು
3. ಭಾರತೀಯ ಚುನಾವಣಾ ಆಯೋಗದಿಂದ ವಾರ್ಷಿಕ ಕ್ರೀಡಾ ಸಪ್ತಾಹ 2026ಕ್ಕೆ ಚಾಲನೆ
4. 22ನೇ ರಾಷ್ಟ್ರೀಯ ಮೌಂಟೆನ್ ಬೈಕ್ ಸೈಕ್ಲಿಂಗ್ ಚಾಂಪಿಯನ್‌ಶಿಪ್: ಮಹಿಳಾ ಎಲೈಟ್ ವಿಭಾಗದಲ್ಲಿ ಕರ್ನಾಟಕದ ಸ್ವಾರ್ ನರ್ಜಾರಿಗೆ ಚಿನ್ನ
5. ಐಸಿಸಿ ಪುರುಷರ ಟಿ–20 ವಿಶ್ವಕಪ್ ಕ್ರಿಕೆಟ್: ದಿನದ ಮೂರನೇ ಪಂದ್ಯ ಶ್ರೀಲಂಕಾ–ಆಸ್ಟ್ರೇಲಿಯಾ ಮುಖಾಮುಖಿ

**************

ನವದೆಹಲಿಯಲ್ಲಿ ಇಂದು ಆರಂಭವಾಗಿರುವ 'ಇಂಡಿಯಾ ಎಐ ಇಂಪ್ಯಾಕ್ಟ್ ಶೃಂಗಸಭೆ 2026'ರ ಭಾಗವಾಗಿ ಆಯೋಜಿಸಲಾಗಿರುವ 'ಇಂಡಿಯಾ ಎಐ ಇಂಪ್ಯಾಕ್ಟ್ ಎಕ್ಸ್‌ಪೋ' ಅನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಉದ್ಘಾಟಿಸಿದರು.

ಜಾಗತಿಕ ದಕ್ಷಿಣದ ರಾಷ್ಟ್ರವೊಂದು ಆಯೋಜಿಸುತ್ತಿರುವ ಈ ಮೊದಲ ಜಾಗತಿಕ ಎಐ ಶೃಂಗಸಭೆಯು ಐದು ದಿನಗಳ ಕಾಲ ನಡೆಯಲಿದ್ದು, ಕೃತಕ ಬುದ್ಧಿಮತ್ತೆ ಕ್ಷೇತ್ರದಲ್ಲಿ ಭಾರತವನ್ನು ಜಾಗತಿಕ ಸಹಯೋಗದ ಕೇಂದ್ರವನ್ನಾಗಿ ರೂಪಿಸುವ ಗುರಿ ಹೊಂದಿದೆ.

ಶೃಂಗಸಭೆಯ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಪ್ರಧಾನಿ, ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ಭಾರತದ ಕ್ಷಿಪ್ರ ಪ್ರಗತಿ ಹಾಗೂ ಜಾಗತಿಕ ಅಭಿವೃದ್ಧಿಗೆ ದೇಶ ನೀಡುತ್ತಿರುವ ಮಹತ್ವದ ಕೊಡುಗೆಗೆ ಈ ಕಾರ್ಯಕ್ರಮವೇ ಸಾಕ್ಷಿಯಾಗಿದೆ ಎಂದು ಬಣ್ಣಿಸಿದ್ದಾರೆ.

ಈ ಬೃಹತ್ ಶೃಂಗಸಭೆಯಲ್ಲಿ ವಿಶ್ವದ ನೂರಕ್ಕೂ ಹೆಚ್ಚು ದೇಶಗಳು ಭಾಗವಹಿಸುತ್ತಿದ್ದು, ಫ್ರಾನ್ಸ್, ಬ್ರೆಜಿಲ್, ಸ್ಪೇನ್ ಸೇರಿದಂತೆ ಇಪ್ಪತ್ತು ರಾಷ್ಟ್ರಗಳ ಪ್ರಮುಖ ನಾಯಕರು ಪಾಲ್ಗೊಳ್ಳುತ್ತಿದ್ದಾರೆ. ಎರಡು ಲಕ್ಷಕ್ಕೂ ಅಧಿಕ ಜನರು ಈಗಾಗಲೇ ಆನ್‌ಲೈನ್ ಮೂಲಕ ನೋಂದಾಯಿಸಿಕೊಂಡಿದ್ದು, 13 ದೇಶಗಳ ಪೆವಿಲಿಯನ್‌ಗಳು ಅಂತಾರಾಷ್ಟ್ರೀಯ ಸಹಯೋಗವನ್ನು ಪ್ರದರ್ಶಿಸಲಿವೆ. ಸಾರ್ವಜನಿಕ ಹಿತದೃಷ್ಟಿಯಿಂದ ಎಐ ತಂತ್ರಜ್ಞಾನದ ಹಂಚಿಕೆಯ ಮಾನದಂಡಗಳು ಮತ್ತು ಪರಿಹಾರಗಳನ್ನು ಬೆಂಬಲಿಸಲು ಈ ವೇದಿಕೆಯು ಪ್ರಮುಖ ಪಾತ್ರ ವಹಿಸಲಿದೆ.

**************

ಕೇಂದ್ರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ನವದೆಹಲಿಯಲ್ಲಿ ಇಂದು ನಡೆದ 'ಎಐ ಇಂಪ್ಯಾಕ್ಟ್ ಶೃಂಗಸಭೆ 2026' ರ ಭಾಗವಾದ ಅಧಿವೇಶನವೊಂದರಲ್ಲಿ ಭಾಗವಹಿಸಿ, ಭಾರತದ ವೇಗವಾಗಿ ಬೆಳೆಯುತ್ತಿರುವ ಕ್ರಿಯೇಟರ್ ಎಕಾನಮಿ ಮತ್ತು ಕೃತಕ ಬುದ್ಧಿಮತ್ತೆಯ ಪರಿವರ್ತನಾತ್ಮಕ ಪರಿಣಾಮದ ಕುರಿತು ಮಾತನಾಡಿದರು.

ದೇಶದ ಬಲಿಷ್ಠ ಡಿಜಿಟಲ್ ಮೂಲಸೌಕರ್ಯ ಮತ್ತು ಕೌಶಲ್ಯ ಪೂರ್ಣ ಜನರು, ಈ ಬೆಳವಣಿಗೆಗೆ ಪ್ರಮುಖ ಕಾರಣವಾಗಿದ್ದು, ಭಾರತದ ಶೇಕಡಾ 90 ರಷ್ಟು ಭಾಗವು ಈಗಾಗಲೇ 5ಜಿ ವ್ಯಾಪ್ತಿಗೆ ಒಳಪಟ್ಟಿರುವುದು ನಾಗರಿಕರನ್ನು ಡಿಜಿಟಲ್ ಲೋಕದಲ್ಲಿ ಸಕ್ರಿಯರನ್ನಾಗಿಸಿದೆ ಎಂದು ಅವರು ತಿಳಿಸಿದರು. ಹೊಸ ತಂತ್ರಜ್ಞಾನಗಳಿಗೆ ಪೂರಕವಾಗಿ ಉದ್ಯೋಗಿಗಳನ್ನು ಸಜ್ಜುಗೊಳಿಸಲು ಸರ್ಕಾರವು ಮರು–ಕೌಶಲ್ಯ ಮತ್ತು ಕೌಶಲ್ಯ ವೃದ್ಧಿಗೆ ಹೆಚ್ಚಿನ ಒತ್ತು ನೀಡುತ್ತಿದೆ ಎಂದು ಅವರು ಭರವಸೆ ನೀಡಿದರು.

ಕೃತಕ ಬುದ್ಧಿಮತ್ತೆಯ ವ್ಯಾಪಕ ಪರಿಣಾಮಗಳ ಬಗ್ಗೆ ಮಾತನಾಡಿದ ಸಚಿವರು, ಕೃಷಿ, ಹವಾಮಾನ ಮುನ್ಸೂಚನೆ, ಹೊಸ ಆವಿಷ್ಕಾರ ಮತ್ತು ಉತ್ಪಾದನಾ ಸಾಮರ್ಥ್ಯವನ್ನು ಹೆಚ್ಚಿಸುವಲ್ಲಿ ಎಐ ಅಪಾರ ಅವಕಾಶಗಳನ್ನು ನೀಡುತ್ತದೆ ಎಂದು ತಿಳಿಸಿದರು.

**************

ಎಐ ಇಂಪ್ಯಾಕ್ಟ್ ಶೃಂಗಸಭೆ ಆಯೋಜಿಸುತ್ತಿರುವುದು ಭಾರತಕ್ಕೆ ಹೆಮ್ಮೆಯ ವಿಷಯವಾಗಿದೆ ಎಂದು ಕೇಂದ್ರ ವಿದ್ಯುನ್ಮಾನ ಹಾಗೂ ಮಾಹಿತಿ ತಂತ್ರಜ್ಞಾನ ಖಾತೆ ರಾಜ್ಯ ಸಚಿವ ಜಿತಿನ್ ಪ್ರಸಾದ್ ಹೇಳಿದ್ದಾರೆ.

ನವದೆಹಲಿಯ ಭಾರತ ಮಂಟಪದಲ್ಲಿಂದು ಶಿಕ್ಷಣಕ್ಕಾಗಿ ಕೃತಕಬುದ್ಧಿಮತ್ತೆ ಕುರಿತ ಅಧಿವೇಶನದ ನಂತರ ಮಾತನಾಡಿದ ಅವರು, ಹಲವು ರಾಷ್ಟ್ರಗಳ ಅಧ್ಯಕ್ಷರು ಹಾಗೂ ಉದ್ಯಮ ನಾಯಕರು ಶೃಂಗಸಭೆಗೆ ಆಗಮಿಸುತ್ತಿದ್ದಾರೆ. ಭಾರತ ಜಾಗತಿಕ ದಕ್ಷಿಣದ ಧ್ವನಿಯಾಗಿ ಹೊರಹೊಮ್ಮಿದೆ ಎಂದಿದ್ದಾರೆ.

**************

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರಿಂದು ಬೆಂಗಳೂರಿನ ಡಿಆರ್‌ಡಿಒ ಅಧೀನದ ಗ್ಯಾಸ್ ಟರ್ಬೈನ್ ಸಂಶೋಧನಾ ಸಂಸ್ಥೆಗೆ ಭೇಟಿ ನೀಡಿ, ಸ್ವದೇಶಿ ಮಿಲಿಟರಿ ಗ್ಯಾಸ್ ಟರ್ಬೈನ್ ಇಂಜಿನ್ ಅಭಿವೃದ್ಧಿಯ ಪ್ರಗತಿಯನ್ನು ಪರಿಶೀಲಿಸಿದರು.

ಈ ಸಂದರ್ಭದಲ್ಲಿ ವಿಜ್ಞಾನಿಗಳೊಂದಿಗೆ ಸಂವಾದ ನಡೆಸಿದ ಅವರು, ಬದಲಾಗುತ್ತಿರುವ ಭೌಗೋಳಿಕ ರಾಜಕೀಯ ಪರಿಸ್ಥಿತಿಯಲ್ಲಿ ಏರೋ ಇಂಜಿನ್ ತಂತ್ರಜ್ಞಾನದಲ್ಲಿ ಸ್ವಾವಲಂಬನೆ ಸಾಧಿಸುವುದು ರಾಷ್ಟ್ರೀಯ ಭದ್ರತೆ ಮತ್ತು ಕಾರ್ಯತಂತ್ರದ ಸ್ವಾಯತ್ತತೆಗೆ ಅತ್ಯಗತ್ಯ ಎಂದು ಪ್ರತಿಪಾದಿಸಿದರು.

ಇತ್ತೀಚಿನ 'ಆಪರೇಷನ್ ಸಿಂಧೂರ್' ಕಾರ್ಯಾಚರಣೆಯ ಸಂದರ್ಭದಲ್ಲಿ ಭಾರತೀಯ ಸಶಸ್ತ್ರ ಪಡೆಗಳು ಸ್ವದೇಶಿ ಸಂವಹನ ಮತ್ತು ಕಣ್ಗಾವಲು ವ್ಯವಸ್ಥೆಗಳನ್ನು ಬಳಸುವ ಮೂಲಕ ತಮ್ಮ ಸಾಮರ್ಥ್ಯವನ್ನು ಪ್ರದರ್ಶಿಸಿವೆ ಎಂದು ಶ್ಲಾಘಿಸಿದ ಸಚಿವರು, ರಾಷ್ಟ್ರೀಯ ಏರೋ ಇಂಜಿನ್ ಮಿಷನ್ ಅಡಿಯಲ್ಲಿ ಬ್ರಿಟನ್ ಮತ್ತು ಫ್ರಾನ್ಸ್ ದೇಶಗಳೊಂದಿಗೆ ನಡೆಯುತ್ತಿರುವ ತಾಂತ್ರಿಕ ಸಹಯೋಗದ ಕುರಿತು ಮಾಹಿತಿ ಪಡೆದರು.

ಇದೇ ವೇಳೆ ಸಚಿವರು, ಸುಧಾರಿತ ಮಧ್ಯಮ ಯುದ್ಧವಿಮಾನ ಎಎಂಸಿಎ ಯೋಜನೆಗಾಗಿ ಕೃತಕ ಬುದ್ಧಿಮತ್ತೆ, ಮೆಷಿನ್ ಲರ್ನಿಂಗ್ ಮತ್ತು ಸುಧಾರಿತ ಮುಂದಿನ ಪೀಳಿಗೆಯ ತಂತ್ರಜ್ಞಾನಗಳನ್ನು ಬಳಸಿಕೊಳ್ಳುವಂತೆ ಸೂಚಿಸಿದರು.

ಏರೋ ಇಂಜಿನ್ ಅಭಿವೃದ್ಧಿಯು ಸಂಕೀರ್ಣ ಮತ್ತು ದೀರ್ಘಕಾಲದ ಪ್ರಕ್ರಿಯೆಯಾಗಿದ್ದರೂ, ಕಾರ್ಯತಂತ್ರದ ಅಗತ್ಯತೆಗಳ ದೃಷ್ಟಿಯಿಂದ ಸಂಶೋಧನಾ ಕಾರ್ಯಗಳನ್ನು ವೇಗಗೊಳಿಸುವಂತೆ ಅವರು ವಿಜ್ಞಾನಿಗಳಿಗೆ ಕರೆ ನೀಡಿದರು. ಈ ತಾಂತ್ರಿಕ ಪ್ರಗತಿಯು ಕೇವಲ ರಕ್ಷಣಾ ಕ್ಷೇತ್ರಕ್ಕೆ ಸೀಮಿತವಾಗದೆ ನಾಗರಿಕ ವಿಮಾನಯಾನ, ವಿದ್ಯುತ್ ಉತ್ಪಾದನೆ ಮತ್ತು ಬಾಹ್ಯಾಕಾಶ ಕ್ಷೇತ್ರಗಳಿಗೂ ಪ್ರಯೋಜನಕಾರಿಯಾಗಲಿದ್ದು, ದೇಶದ ಒಟ್ಟಾರೆ ಆರ್ಥಿಕ ಬೆಳವಣಿಗೆಗೆ ಪೂರಕವಾಗಲಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

**************

2020ರ ಆಟಿಕೆಗಳ ಕಡ್ಡಾಯ ಗುಣಮಟ್ಟ ನಿಯಂತ್ರಣ ಆದೇಶ ಮತ್ತು ಭಾರತೀಯ ಗುಣಮಟ್ಟ ಬ್ಯೂರೊ ಬಿಐಎಸ್ ಮಾನದಂಡಗಳನ್ನು ಉಲ್ಲಂಘಿಸಿ ಆಟಿಕೆಗಳನ್ನು ಮಾರಾಟ ಮಾಡುತ್ತಿದ್ದ ಇ-ಕಾಮರ್ಸ್ ಸಂಸ್ಥೆಗಳ ವಿರುದ್ಧ ಕೇಂದ್ರ ಗ್ರಾಹಕ ಸಂರಕ್ಷಣಾ ಪ್ರಾಧಿಕಾರ ಸಿಸಿಪಿಎ ಕಟ್ಟುನಿಟ್ಟಿನ ಕ್ರಮ ಕೈಗೊಂಡಿದೆ.

ಮಾನದಂಡ ಪಾಲಿಸದ ಖಾಸಗಿ ಕಂಪನಿಯೊಂದಕ್ಕೆ ಪ್ರಾಧಿಕಾರ ಐದು ಲಕ್ಷ ರೂಪಾಯಿ ದಂಡ ವಿಧಿಸಿದೆ. ಭವಿಷ್ಯದಲ್ಲಿ ನಿಯಮ ಪಾಲನೆಯನ್ನು ಖಚಿತಪಡಿಸಿಕೊಳ್ಳಲು ಮತ್ತು ಗ್ರಾಹಕ ಕುಂದು-ಕೊರತೆ ನಿವಾರಣಾ ಸೌಲಭ್ಯಗಳನ್ನು ಬಲಪಡಿಸಲು ಕಂಪನಿಗೆ ಸಿಸಿಪಿಎ ಸೂಚನೆ ನೀಡಿದೆ.

**************

ಭಾರತೀಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಸೇವೆ, ರಕ್ಷಣಾ ವಾಯುಯಾನ ಗುಣಮಟ್ಟ ಭರವಸೆ ಸೇವೆ ಮತ್ತು ಭಾರತೀಯ ವ್ಯಾಪಾರ ಸೇವೆಯ ತರಬೇತಿ ಅಧಿಕಾರಿಗಳು ಇಂದು ನವದೆಹಲಿಯ ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಿದರು.

ತರಬೇತಿಪಡೆದವರನ್ನು ಉದ್ದೇಶಿಸಿ ಮಾತನಾಡಿದ ರಾಷ್ಟ್ರಪತಿಗಳು, ಭಾರತೀಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಸೇವೆಯ ಅಧಿಕಾರಿಗಳನ್ನು ಸಾರ್ವಜನಿಕ ನಂಬಿಕೆಯ ಪಾಲಕರು ಮತ್ತು ಆರ್ಥಿಕ ವಿವೇಕದ ರಕ್ಷಕರು ಎಂದು ಬಣ್ಣಿಸಿದರು. ಕಾರ್ಯನಿರ್ವಾಹಕ ಮತ್ತು ಲೆಕ್ಕಪರಿಶೋಧನಾ ಸಂಸ್ಥೆಗಳ ನಡುವೆ ಹೆಚ್ಚಿನ ಸಮನ್ವಯ ಆಡಳಿತ ವ್ಯವಸ್ಥೆಯಲ್ಲಿ ದಕ್ಷತೆ ಮತ್ತು ಮೌಲ್ಯವರ್ಧನೆ ಹೆಚ್ಚಾಗುತ್ತದೆ. ಪ್ರಜಾಪ್ರಭುತ್ವ ಸಂಸ್ಥೆಗಳನ್ನು ಬಲಪಡಿಸಲು ಪಾರದರ್ಶಕತೆ ಮತ್ತು ಸಮಗ್ರತೆ ಅತ್ಯಗತ್ಯ ಎಂದು ರಾಷ್ಟ್ರಪತಿ ಹೇಳಿದರು.

ರಕ್ಷಣಾ ವಾಯುಯಾನ ಗುಣಮಟ್ಟ ಭರವಸೆ ಸೇವೆಯ ಅಧಿಕಾರಿಗಳೊಂದಿಗೆ ಸಂವಹನ ನಡೆಸಿದ ರಾಷ್ಟ್ರಪತಿ, ಸಶಸ್ತ್ರ ಪಡೆಗಳಿಗೆ ತಾಂತ್ರಿಕವಾಗಿ ಮುಂದುವರಿದ ಮತ್ತು ವಿಶ್ವ ದರ್ಜೆಯ ಶಸ್ತ್ರಾಸ್ತ್ರ ಮತ್ತು ಮದ್ದುಗುಂಡುಗಳಿಗೆ ಅತ್ಯುನ್ನತ ಗುಣಮಟ್ಟದ ಮಾನದಂಡಗಳನ್ನು ಖಚಿತಪಡಿಸಿಕೊಳ್ಳುವುದು ಅವರ ಪ್ರಮುಖ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಬಹು–ಕ್ಷೇತ್ರಗಳ ಸಮಗ್ರ ಕಾರ್ಯಾಚರಣೆಗಳಿಗೆ ಸಮರ್ಥವಾದ, ಯುದ್ಧಕ್ಕೆ ಸಿದ್ಧವಾದ ಪಡೆಯಾಗಿ ಪರಿವರ್ತಿಸಲು ಸಹಾಯ ಮಾಡಲು ನವೀನ ವಿಧಾನಗಳನ್ನು ಅಳವಡಿಸಿಕೊಳ್ಳುವಂತೆ ರಾಷ್ಟ್ರಪತಿ ದ್ರೌಪದಿ ಮುರ್ಮು ಸಲಹೆ ನೀಡಿದರು.

**************

ರಾಜಸ್ಥಾನದ ಭಿವಾಡಿಯಲ್ಲಿರುವ ರಾಸಾಯನಿಕಾ ಕಾರ್ಖಾನೆಯಲ್ಲಿ ಅಗ್ನಿ ಅವಘಡದಿಂದಾಗಿ ಸಂಭವಿಸಿದ ಸಾವು–ನೋವುಗಳ ಬಗ್ಗೆ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಸೇರಿದಂತೆ ಗಣ್ಯರು ದುಃಖ ವ್ಯಕ್ತಪಡಿಸಿದ್ದಾರೆ.

ಸಾಮಾಜಿಕ ಮಾಧ್ಯಮ ಸಂದೇಶದಲ್ಲಿ ಉಪರಾಷ್ಟ್ರಪತಿ, ಪ್ರಧಾನಿ ಹಾಗೂ ಕೇಂದ್ರ ಸಚಿವರು ಮೃತಪಟ್ಟವರ ಕುಟುಂಬಗಳಿಗೆ ಸಂತಾಪಗಳನ್ನು ತಿಳಿಸಿದ್ದು, ಗಾಯಗೊಂಡವರ ಶೀಘ್ರ ಚೇತರಿಕೆಗೆ ಪ್ರಾರ್ಥಿಸಿದ್ದಾರೆ.

**************

ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ರಾಜ್ಯ ಸಚಿವ ಜಿತಿನ್ ಪ್ರಸಾದ ಇಂದು ನವದೆಹಲಿಯಲ್ಲಿ ಐರ್ಲೆಂಡ್‌ನ ಸುಧಾರಣೆ ಮತ್ತು ಡಿಜಿಟಲೀಕರಣ ಸಚಿವ ಜ್ಯಾಕ್ ಚೇಂಬರ್ಸ್ ಅವರನ್ನು ಭೇಟಿಯಾದರು.

ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ, ಸುಧಾರಣೆ–ಚಾಲಿತ ಆಡಳಿತ, ಉದಯೋನ್ಮುಖ ತಂತ್ರಜ್ಞಾನಗಳು ಮತ್ತು ಎರಡೂ ರಾಷ್ಟ್ರಗಳ ನಡುವಿನ ಹೂಡಿಕೆ ಸಂಪರ್ಕಗಳಲ್ಲಿ ಸಹಯೋಗವನ್ನು ಹೆಚ್ಚಿಸಲು ಉಭಯ ಸಚಿವರು ಮಾರ್ಗಗಳನ್ನು ಅನ್ವೇಷಿಸಿರುವುದಾಗಿ ತಿಳಿಸಿದ್ದಾರೆ.

**************

ನವದೆಹಲಿಯಲ್ಲಿಂದು ಭಾರತೀಯ ಚುನಾವಣಾ ಆಯೋಗ ವಾರ್ಷಿಕ ಕ್ರೀಡಾ ಸಪ್ತಾಹ 2026 ರ ಆಚರಣೆಗೆ ಚಾಲನೆ ನೀಡಿದೆ.

ಸಭೆಯನ್ನುದ್ದೇಶಿಸಿ ಮಾತನಾಡಿದ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್, ಕ್ರೀಡೆ ಮತ್ತು ಚುನಾವಣೆಗಳ ನಡುವಿನ ಹಂಚಿಕೆಯ ಮೌಲ್ಯಗಳ ಬಗ್ಗೆ ಬೆಳಕು ಚೆಲ್ಲಿದರು.
ಒಂದು ವಾರದ ಆಚರಣೆಗಳಲ್ಲಿ ಭಾಗವಹಿಸುವವರು, ಕ್ರೀಡಾಕೂಟಗಳಲ್ಲಿ ಭಾಗವಹಿಸುವಂತೆ ಅವರು ಪ್ರೋತ್ಸಾಹಿಸಿದರು.
ಇದೇ ವೇಳೆ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ 'ಪ್ರಜಾಪ್ರಭುತ್ವಕ್ಕಾಗಿ ಓಟ' ಎಂಬ ವಿಷಯದಡಿಯಲ್ಲಿ 100 ಮೀಟರ್ ಮಹಿಳಾ ಓಟವನ್ನು ಉದ್ಘಾಟಿಸಿದರು. ಮೈದಾನದಲ್ಲಿ ಸಾಮರಸ್ಯ, ಪ್ರಜಾಪ್ರಭುತ್ವದಲ್ಲಿ ಶಕ್ತಿ ಎಂಬುದು ಈ ವರ್ಷದ ವಾರ್ಷಿಕ ಕ್ರೀಡಾ ಸಪ್ತಾಹ ಆಚರಣೆಯ ಧ್ಯೇಯವಾಕ್ಯವಾಗಿದೆ.

**************

ಅರುಣಾಚಲ ಪ್ರದೇಶದ ರೋಯಿಂಗ್‌ನಲ್ಲಿ ನಡೆಯುತ್ತಿರುವ 22ನೇ ರಾಷ್ಟ್ರೀಯ ಮೌಂಟೆನ್ ಬೈಕ್ ಸೈಕ್ಲಿಂಗ್ ಚಾಂಪಿಯನ್‌ಶಿಪ್‌ನ ಎರಡನೇ ದಿನವಾದ ಇಂದು ಮಹಿಳಾ ಎಲೈಟ್ ಕ್ರಾಸ್ ಕಂಟ್ರಿ ಟೈಂ ಟ್ರಯಲ್ ಸ್ಪರ್ಧೆಯಲ್ಲಿ ಕರ್ನಾಟಕದ ಸ್ವಾರ್ ನರ್ಝಾರಿ ಚಿನ್ನದ ಪದಕ ಗೆದ್ದಿದ್ದಾರೆ.

ಇನ್ನೂ ಸಬ್ ಜೂನಿಯರ್ ಬಾಲಕಿಯರ ಕ್ರಾಸ್ ಕಂಟ್ರಿ ಟೈಂ ಟ್ರಯಲ್ ವಿಭಾಗದ ಸ್ಪರ್ಧೆಯಲ್ಲಿ ತಮಿಳುನಾಡಿನ ಹಾಶಿನಿ.ಕೆ ಚಿನ್ನದ ಪದಕ ಗೆದ್ದಿದ್ದಾರೆ. ಮಹಿಳಾ ಜೂನಿಯರ್ ಕ್ರಾಸ್ ಕಂಟ್ರಿ ಟೈಂ ವೈಯಕ್ತಿಕ ವಿಭಾಗದಲ್ಲಿ ತಮಿಳುನಾಡಿನ ಸೌಬರ್ಣಿಕಾ.ಎಸ್ ಸಬ್ ಜೂನಿಯರ್ ಬಾಲಕರ ಕ್ರಾಸ್ ಕಂಟ್ರಿ ಟೈಂ ಟ್ರಯಲ್ ವಿಭಾಗದಲ್ಲಿ ಪ್ರಾಣೇಶ್.ಎಸ್ ಚಿನ್ನದ ಪದಕ ಗೆದ್ದಿದ್ದಾರೆ.

ಪುರುಷರ ಜೂನಿಯರ್ ವಿಭಾಗದಲ್ಲಿ ಮಹಾರಾಷ್ಟ್ರದ ಸೋನಾವಾನೇ ಯೋಗೇಶ್ ಸ್ವರ್ಣ ಪದಕ ತಮ್ಮದಾಗಿಸಿಕೊಂಡಿದ್ದಾರೆ.

**************

ಶ್ರೀಲಂಕಾದ ಪಲ್ಲೆಕೆಲೆ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಐಸಿಸಿ ಪುರುಷರ ಟಿ–20 ವಿಶ್ವಕಪ್ ಕ್ರಿಕೆಟ್ ಪಂದ್ಯಾವಳಿಯ ದಿನದ ಮೂರನೇ ಪಂದ್ಯದಲ್ಲಿ ಶ್ರೀಲಂಕಾ ಹಾಗೂ ಆಸ್ಟ್ರೇಲಿಯಾ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದಿರುವ ಶ್ರೀಲಂಕಾ ತಂಡ ಫೀಲ್ಡಿಂಗ್ ಆಯ್ದುಕೊಂಡಿದೆ.

ಮೊದಲು ಬ್ಯಾಟಿಂಗ್ ಮಾಡುತ್ತಿರುವ ಆಸ್ಟ್ರೇಲಿಯಾ, ಇತ್ತೀಚಿನ ವರದಿ ಬಂದಾಗ 8.3 ಓವರ್‌ಗಳಲ್ಲಿ 1 ವಿಕೆಟ್ ನಷ್ಟಕ್ಕೆ 104 ರನ್ ಗಳಿಸಿ ಆಡುತ್ತಿದೆ. ಇದಕ್ಕೂ ಮುನ್ನ, ಕೊಲ್ಕತ್ತಾದ ಈಡನ್ ಗಾರ್ಡನ್ಸ್‌ನಲ್ಲಿ ನಡೆದ ದಿನದ ಎರಡನೇ ಪಂದ್ಯದಲ್ಲಿ ಇಂಗ್ಲೆಂಡ್ ತಂಡ ಇಟಲಿ ತಂಡವನ್ನು 24 ರನ್‌ಗಳಿಂದ ಮಣಿಸಿದೆ.

*******ಮುಕ್ತಾಯ*******